ಕರ್ನಾಟಕ ಸರ್ಕಾರ
(ತಾಂತ್ರಿಕ ಶಿಕ್ಷಣ ಇಲಾಖೆ)

ಸಂಖ್ಯೆ: ಸಿಟಿಇ 06 ಡಿವಿಪಿ (1) 2024.

ಆಯುಕ್ತರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ: 15.04.2023

## ಅಧಿಕೃತ ಜ್ಞಾಪನ

**ವಿಷಯ:** 2024-25 ನೇ ಸಾಲಿನಲ್ಲಿ ಒದಗಿಸಲಾದ ಆಯವ್ಯಯದ ಮೊದಲನೇ ಕಂತಿನ ಅನುದಾನವನ್ನು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಹೆಚ್‌ಪಿಟಿ 2024, ದಿನಾಂಕ 04.04.2024

*********

ಮೇಲೆ ನಮೂದಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಆದೇಶದಲ್ಲಿ 2024-25 ನೇ ಆರ್ಥಿಕ ಸಾಲಿಗೆ ಶಿಕ್ಷಣ ಇಲಾಖೆಯ ಉನ್ನತ ಶಿಕ್ಷಣ ವಲಯದಡಿ ಬರುವ ತಾಂತ್ರಿಕ ಶಿಕ್ಷಣಕ್ಕೆ (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದಂತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿ ಮುಂದುವರಿದ ಕಾರ್ಯಕ್ರಮಗಳನ್ನು ಮುಂದುವರಿಸಲು ಮತ್ತು ಅನುಷ್ಠಾನಗೊಳಿಸಲು ಅನುಮತಿ ನೀಡಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಸರ್ಕಾರ ಆದೇಶಿಸಿದೆ.

ಆದುದರಿಂದ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ವಿವಿಧ ಉಪ ಶೀರ್ಷಿಕೆಗಳಲ್ಲಿ ಆಡಳಿತಾತ್ಮಕ ಉದ್ದೇಶಗಳಿಗೆ 2024-25 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2203-00-103-0-01 ರಡಿ ಮೊದಲನೇ ಕಂತಿನ ಅನುದಾನವಗಿ 052-ದೂರವಾಣಿ ವೆಚ್ಚದಡಿ ರೂ. 50,000/- ಗಳನ್ನು ದೂರವಾಣಿ ವೆಚ್ಚ ಭರಿಸಲು, 041-ಪ್ರಯಾಣ ವೆಚ್ಚಗಳಡಿ ರೂ.25000/- ಗಳನ್ನು ಪ್ರಯಾಣ ವೆಚ್ಚಗಳನ್ನು ಭರಿಸಲು,, 071-ಕಟ್ಟಡ ವೆಚ್ಚದಡಿ ರೂ. 1,50,000/- ಗಳನ್ನು ವಿದ್ಯುತ್ ವೆಚ್ಚ, ಕಟ್ಟಡ ಬಾಡಿಗೆ ಹಾಗೂ ನೀರಿನ ವೆಚ್ಚ ಭರಿಸಲು ಮತ್ತು 051-ಸಾಮಾನ್ಯ ವೆಚ್ಚಗಳಡಿ ರೂ.75,000/- ಗಳನ್ನು, ಸಿಸಿಟಿವಿ ಖರೀದಿ, ಕಂಪ್ಯೂಟರ್ ಸೌಲಭ್ಯ ಒದಗಿಸಲು ಅವಶ್ಯವಿರುವ ಪೀಠೋಪಕರಣಗಳ ಖರೀದಿ, ಪುಸ್ತಕ, ಬಯೋಮೆಟ್ರಿಕ್ ಯಂತ್ರ ಖರೀದಿಸಲು, ಈಗಾಗಲೇ ಖರೀದಿಸಲಾಗಿರುವ ಉಪಕರಣಗಳ ನಿರ್ವಹಣೆ, ಹಾಗೂ ಹಿಂದಿನ ಸಾಲುಗಳ ನಿರ್ವಹಣೆಗಾಗಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಆಡಳಿತಾತ್ಮಕ ಉದ್ದೇಶಗಳಿಗಾಗಿ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

| ಕ್ರ ಸಂ | ಸಂಸ್ಥೆ | ಡಿಡಿಓ ಕೋಡ್ | 041-ಪ್ರಯಾಣ ವೆಚ್ಚಗಳು | 051-ಸಾಮಾನ್ಯ ವೆಚ್ಚ | 052-ದೂರವಾಣಿ ವೆಚ್ಚ | 071-ಕಟ್ಟಡ ವೆಚ್ಚ |
|---|---|---|---|---|---|---|
| 1 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭದ್ರಾವತಿ | 33240O | 0 | 12,5000 | 5,000 | 30,000 |
| 2 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಮಂಗಳೂರು | 33257O | 0 | 12,5000 | 9,000 | 30,000 |
| 3 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 33277O | 0 | 12,5000 | 9,000 | 0 |
| 4 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 33297O | 0 | 12,5000 | 9,000 | 30,000 |
| 5 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಕಲಬುರ್ಗಿ | 33301O | 25,000 | 12,5000 | 9,000 | 30,000 |

| | | | | | | |
|---|---|---|---|---|---|---|
| 6 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 333050 | 0 | 12,5000 | 9,000 | 30,000 |
| ಒಟ್ಟು | | | **25,000/-** | **75,000/-** | **50,000/-** | **1,50,000/-** |

ಪ್ರಸ್ತುತ ಬಿಡುಗಡೆ ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ವೆಚ್ಚ ಮಾಡಿ ಬಳಿಕೆ ಪ್ರಮಾಣ ಪತ್ರ (Utilization Certificate) ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

**ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.**

**ನಿರ್ದೇಶಕರು**

**ತಾಂತ್ರಿಕ ಶಿಕ್ಷಣ ಇಲಾಖೆ.**

(**ವಿಶೇಷ ಸೂಚನೆ:** ಮೇಲ್ಕಂಡ ಕೋಷ್ಟಕದಂತೆ ಮೊದಲನೇ ಕಂತಿನಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಜೂನ್-2024 ರ ಅಂತ್ಯದ ಒಳಗೆ ನಿಯಮಾನುಸಾರ ವೆಚ್ಚ ಮಾಡದಿದ್ದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ನೇರ ಹೊಣೆಗಾರರನ್ನಾಗಿ ಮಾಡಿ ಯಾವುದೇ ಕಾರಣಕ್ಕೂ ಎರಡನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡುವುದಿಲ್ಲವೆಂದು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು ಪ್ರಸ್ತುತ ಕೋಷ್ಟಕದಲ್ಲಿನ ಲೆಕ್ಕಶೀರ್ಷಿಕೆಗಳಿಗೆ ಬಿಡುಗಡೆಯಾದ ಅನುದಾನವು ಸಂಸ್ಥೆಗೆ ಅವಶ್ಯವಿಲ್ಲದಿದ್ದರೆ dte.dvp1@gmail ವಿಳಾಸಕ್ಕೆ ಪತ್ರದ(PDF) ಮುಖಾಂತರ ಮಾಹಿತಿ ನೀಡಲು ಸೂಚಿಸಲಾಗಿದೆ)

**ಇವರಿಗೆ:**

ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಪ್ರತಿ:**

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು- ಇವರ ಮಾಹಿತಿಗಾಗಿ.
2. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು- ಇವರ ಮಾಹಿತಿಗಾಗಿ.
3. ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ.
4. ಲೆಕ್ಕಾಧಿಕಾರಿಗಳು (ಬಿಲ್ಸ್).